**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಜಂಬೂರಾಜ್ ಮಹಜನ್ | ಪ್ರಾಸಾ-15 |
| ತಂದೆಯ ಹೆಸರು | : ಬಾಬು ಮಹಜನ್ | ಚಾಸಾ-25 |
| ವಯಸ್ಸು | : 34 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ06.03.2026 |
| ವಾಸಸ್ಥಳ | : ಕಡಬ ಪೋಲಿಸ್ ಠಾಣೆ | |

**ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದಃ**

ನಾನು ದಿ.15.10.2022 ರಿಂದ ದಿ.10.11.2023 ರವರೆಗೂ ಬಣಕಲ್ ಪೋಲಿಸ್ ಠಾಣೆಯ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.02.11.2023 ರಂದು ಪ್ರಕರಣದ ಕಡತವನ್ನು ಚಾಸಾ-20 ರವರಿಂದ ಮುಂದಿನ ತನಿಖೆ ಸಂಬಂದ ಸ್ವೀಕರಿಸಿಕೊಂಡು ಅದೇದಿನ ಚಾಸಾ-2 ರಿಂದ 5 ರವರ ಹೇಳಿಕೆಯನ್ನು ದಾಖಲಿಸಿಕೊಡಿರುತ್ತೇನೆ. ನಂತರ ಅದೇ ದಿನ ಚಾಸಾ-1 ರವರು ತೋರಿಸಿದ ಮೇರೆಗೆ ಘಟನಾ ಸ್ಥಳದ ಮಹಜರ್ ನ್ನು ಚಾಸಾ-6 ಮತ್ತು 7 ರವರ ಸಮಕ್ಷಮ ಜರುಗಿಸಿರುತ್ತೇನೆ. ದಿ.10.11.2023 ರಂದು ಚಾಸಾ-1 ರವರು ಠಾಣೆಯಲ್ಲಿ ಕೃತ್ಯ ನಡೆದ ಸಮಯ ಆರೋಪಿಯು ಚಾಸಾ-1 ರವರು ಧರಿಸಿದ್ದ ಶರ್ಟ್ ನ್ನು ಹರಿದಿದ್ದು ಅದನ್ನು ಹಾಜರುಪಡಿಸಿರುತ್ತಾರೆ ಮತ್ತು ಸದರಿ ಶರ್ಟ್ ನ್ನು ಚಾಸಾ-6 ಮತ್ತು 8 ರವರ ಸಮಕ್ಷಮ ಮಹಜರ್ ಮೂಲಕ ವಶಕ್ಕೆ ಪಡೆದುಕೊಂಡು ನ್ಯಾಯಾಲಯಕ್ಕೆ ಸ್ವತ್ತು ಪಟ್ಟಿಯನ್ನು ಸಲ್ಲಿಸಿರುತ್ತೇನೆ. ದಿ.10.11.2023 ರಂದು ನನ್ನ ವರ್ಗಾವಣೆ ನಿಮಿತ್ತ ಪ್ರಕರಣದ ಕಡತವನ್ನು ಚಾಸಾ-26 ರವರಿಗೆ ನೀಡಿರುತ್ತೇನೆ.

ಸಾಕ್ಷಿಯು ನಿಪಿ-3 ಮತ್ತು 5 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3(ಡಿ) ಮತ್ತು 5(ಡಿ) ಎಂದು ಗುರುತಿಸಲಾಯಿತು. ನಿಪಿ-4 ಮತ್ತು 6 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಎಂ.ಒ.1 ನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಎಸ್.ಆರ್. ವಕೀಲರಿಂದಃ**

ಚಾಸಾ-20 ರವರಿಂದ ಕಡತವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-4 ರಲ್ಲಿರುವ ಫೋಟೋವನ್ನು View ಪಾಯಿಂಟ್ ಬಳಿ ತೆಗೆಯದೇ ಯಾವುದೋ ರಸ್ತೆ ಬದಿಯಲ್ಲಿ ತೆಗೆಯಲಾಗಿರುತ್ತದೆ ಎಂದರೆ ಸರಿಯಲ್ಲ. ಚಾಸಾ-8 ರವರು ನಮ್ಮ ಠಾಣೆಯ ಹಲವು ಪ್ರಕರಣಗಳಲ್ಲಿ ಪಂಚರಾಗಿ ಹಾಜರಾಗಿರುತ್ತಾರೆ

ಎಂದರೆ ಸರಿಯಲ್ಲ. ತನಿಖೆಯನ್ನು ಮುಂದುವರೆಸಿ ಚಾಸಾ-2 ರಿಂದ 4 ರವರ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ತನಿಖೆಯ ಸಮಯದಲ್ಲಿ ಆರೋಪಿಯ ಖಾಯಂ ವಿಳಾಸದ ಬಗ್ಗೆ ತಿಳಿದುಕೊಳ್ಳಲು ಯಾವುದೇ ದಾಖಲಾತಿಗಳನ್ನು ಪರಿಶೀಲಿಸಿರುವುದಿಲ್ಲ. ಚಾಸಾ-6 ಮತ್ತು 7 ರವರ ಸಮಕ್ಷಮ ಅಮಾನತ್ ಮಹಜರ್ ಕ್ರಮವನ್ನು ಜರುಗಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿ.10.12.2023 ರಂದು ಚಾಸಾ-1 ರವರಿಗೆ ಸೇರಿದ ಶರ್ಟ್ ನ್ನು ಅಮಾನತುಪಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಅಮಾನತ್ ಮಹಜರ್ ನ್ನು ಚಾಸಾ-6 ಮತ್ತು 8 ರವರ ಸಮಕ್ಷಮ ಠಾಣೆಯಲ್ಲಿ ಮಾಡಲಾಗಿರುತ್ತದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ತನಿಖೆಯನ್ನು ಕೈಗೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಕೌಶಿಕ್ ಬಿ.ಸಿ. | ಪ್ರಾಸಾ-16 |
| ತಂದೆಯ ಹೆಸರು | : ಚಂದ್ರಶೇಖರ್ | ಚಾಸಾ-27 |
| ವಯಸ್ಸು | : 35 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 06.03.2026. |
| ವಾಸಸ್ಥಳ | : ಉಪ್ಪಿನಂಗಡಿ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ಫೆಬ್ರವರಿ 2024 ರಿಂದ ಜುಲೈ 2024 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.01.03.2024 ರಂದು ಚಾಸಾ-26 ರವರಿಂದ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಪಡೆದುಕೊಂಡಿರುತ್ತೇನೆ. ಅದೇ ದಿನ ಚಾಸಾ-19 ರವರಿಂದ ಕಲಂ 65 ಬಿ ರಡಿಯ ದೃಢೀಕೃತ ಪ್ರತಿಯನ್ನು ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ತನಿಖೆಯು ಪೂರ್ಣಗೊಂಡಿದ್ದು ಆರೋಪಿಯ ವಿರುದ್ಧ ಆರೋಪವು ಸಾಬೀತಾದ ಕಾರಣ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಕೊಂಡಿರುತ್ತೇನೆ.

ಸಾಕ್ಷಿಯು ನಿಪಿ-8 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಎಸ್.ಆರ್. ವಕೀಲರಿಂದಃ**

ನಾನು ಚಾಸಾ-26 ರವರಿಂದ ಮುಂದುವರೆದ ತನಿಖೆಗಾಗಿ ಕಡತವನ್ನು ಸ್ವೀಕರಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ. ನಾನು ಚಾಸಾ-19 ರವರಿಂದ ಯಾವುದೇ ದೃಢೀಕೃತ ಪ್ರತಿಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಆರೋಪವು ಸಾಬೀತಾಗದಿದ್ದರೂ ಸುಳ್ಳು ದೋ.ಪ.ಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.